**ಸಿವಿಲ್ ಜಡ್ಜ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಲಯ, ಜೇವರ್ಗಿ**

| | |
|---|---|
| ಕ್ರಿಮಿನಲ್ ಪ್ರಕರಣ ಸಂಖ್ಯೆ | 12/2017 |

ದಿನಾಂಕ 29.04.2025 ರಂದು ಸಾಕ್ಷಿಗೆ ಕರೆಸಿ ಪ್ರತಿಜ್ಞಾ ವಿಧಿ ಬೋಧಿಸಲಾಯಿತು.

ಚಾಸಾಃ 7 ಪ್ರಾಸಾಃ 2

| | |
|---|---|
| ಹೆಸರು | ಅಲ್ಲಾ ಬಕ್ಷ |
| ತಂದೆಯ ಹೆಸರು | ಉಸ್ಮಾನಸಾಬ |
| ವಯಸ್ಸು | 53 ವರ್ಷಗಳು |
| ಉದ್ಯೋಗ | ಎಎಸ್ಐ |
| ವಾಸಸ್ಥಳ | ಮಹಿಳಾ ಪೋಲಿಸ ಠಾಣೆ ಕಲಬುರಗಿ |

**ಮುಖ್ಯ ವಿಚಾರಣೆಃ ಸ ಸ ಅ ರವರಿಂದಃ**

2015 ರಿಂದ 2019 ರವರೆಗೆ ಮುಖ್ಯ ಪೇದೆಯಾಗಿ ನಾನು ನೆಲೋಗಿ ಪೋಲಿಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 27.10.2016 ರಂದು ಸಾಯಂಕಾಲ 4.30 ರ ಸಮಯದಲ್ಲಿ ನಾನು ಠಾಣೆಯಲ್ಲಿ ಚಾಸಾ-1 ರವರು ಮುದ್ದೆಮಾಲು ಹಾಗೂ ಜಪ್ತಿ ಪಂಚನಾಮೆಯೊಂದಿಗೆ ಹಾಜರಾಗಿ ಸಲ್ಲಿಸಿದ ವರದಿಯನ್ನು ಸ್ವೀಕರಿಸಿ ಠಾಣಾ ಗುನ್ನೆ ಸಂಖ್ಯೆ 210/2016 ರಲ್ಲಿ ಪ್ರಕರಣ ದಾಖಲಿಸಿಕೊಂಡು ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಈಗ ನಾನು ವರದಿಯನ್ನು ನೋಡುತ್ತಿದ್ದು ಅದರಲ್ಲಿ ನನ್ನ ಸಹಿ ಇರುತ್ತದೆ. ಅದನ್ನು ನಿಪಿ-2 ಎಂದು, ಸಾಕ್ಷಿ ಸಹಿಯನ್ನು ನಿಪಿ-2(ಎ) ಎಂದು ಗುರುಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನೋಡುತ್ತಿದ್ದು ಅದರಲ್ಲಿ ನನ್ನ ಸಹಿ ಇರುತ್ತದೆ. ಪ್ರಥಮ ವರ್ತಮಾನ ವರದಿಯನ್ನು ನಿಪಿ-3 ಎಂದು ಮತ್ತು ಸಾಕ್ಷಿ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು.

ದಿನಾಂಕ 27.10.2016 ಚಾಸಾ-4 ರವರ ಹೇಳಿಕೆ ಪಡೆದಿರುತ್ತೇನೆ. ಪ್ರಕರಣದ ಮುಂದಿನ ತನಿಖೆಯನ್ನು ಚಾಸಾ-8 ರವರಿಗೆ ಹಸ್ತಾಂತರಿಸಿರುತ್ತೇನೆ.

**<u>ಪಾಟೀ ಸವಾಲುಃ ಆಪಾದಿತರ ಪರ ವಕೀಲರಿಂದ:</u>**

ದಿನಾಂಕ 10.10.2016 ರಂದು ಚಾಸಾ-4 ರವರ ಹೇಳಿಕೆ ಪಡೆದಿರುತ್ತೀರಾ ಎಂದರೆ ಸಾಕ್ಷಿ ದಿನಾಂಕ 27.10.2016 ಹೇಳಿಕೆ ಪಡೆದಿದ್ದು ಆದರೆ ಸದರಿ ಹೇಳಿಕೆ ನಜರ ಚುಕಿನಿಂದ ದಿನಾಂಕ 10.10.2016 ಎಂದು ನಮೂದಾಗಿರುತ್ತದೆ.

ದಿನಾಂಕ 27.10.2016 ರಂದು ಸಾಯಂಕಾಲ 4.30 ರ ಸಮಯದಲ್ಲಿ ನಾನು ಠಾಣೆಯಲ್ಲಿ ಚಾಸಾ-1 ರವರು ಮುದ್ದೆಮಾಲು ಹಾಗೂ ಜಪ್ತಿ ಪಂಚನಾಮೆಯೊಂದಿಗೆ ಹಾಜರಾಗಿ ಸಲ್ಲಿಸಿದ ವರದಿಯನ್ನು ಸ್ವೀಕರಿಸಿ ಪ್ರಕರಣ ದಾಖಲಿಸಿಕೊಂಡು ಅದೆ ದಿನ ಚಾಸಾ-4 ರವರ ಹೇಳಿಕೆ ಪಡೆದಿರುತ್ತೇನೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮೇಲಾಧಿಕಾರಿಗಳ ಮಾತು ಕೇಳಿ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷಿ ಹೇಳತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರುವಿಚಾರಣೆಃ ಇಲ್ಲ.</u>
(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿದಾರರ ಹೇಳಿಕೆಯನ್ನು ಸಾಕ್ಷಿದಾರರು ಹೇಳಿದಂತೆ ನನ್ನ ಉಕ್ತ ಲೇಖನಕ್ಕೆ ಕಂಪ್ಯೂಟರ್ ನಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ.ಕೇ. ಸರಿ ಇರುತ್ತದೆ

ಜೆ.ಎಮ್.ಎಫ್.ಸಿ.
ಜೇವರ್ಗಿ